ಕರ್ನಾಟಕ ಸರ್ಕಾರ

ಅರಣ್ಯ ಇಲಾಖೆ

ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ (ಮುಖ್ಯಸ್ಥರು, ಅರಣ್ಯ ಪಡೆ) ಹಾಗೂ ಆಯ್ಕೆ ಪ್ರಾಧಿಕಾರ
ಇವರ ಕಚೇರಿ, ಅರಣ್ಯ ಭವನ, ಮಲ್ಲೇಶ್ವರಂ, ಬೆಂಗಳೂರು–560003

## ಮುಂದುವರಿದ ಅಧಿಸೂಚನೆ

ಅಧಿಸೂಚನೆ ಸಂಖ್ಯೆ: ಬಿ9–ನೇಮಕಾತಿ–ವಿವ–4/2015–16 ದಿನಾಂಕ 30–03–2016

### ಉಪ ವಲಯ ಅರಣ್ಯಾಧಿಕಾರಿ ಹುದ್ದೆಗಳಿಗೆ ನೇರ ನೇಮಕಾತಿ

–0–

ಅರಣ್ಯ ಇಲಾಖೆಯಲ್ಲಿ ಕರ್ನಾಟಕ ಅರಣ್ಯ ಇಲಾಖಾ ಸೇವೆಗಳು (ನೇಮಕಾತಿ) (ತಿದ್ದುಪಡಿ) ನಿಯಮಗಳು, 2012ರ ನಿಯಮಗಳಂತೆ ಅರಣ್ಯ ಇಲಾಖೆಯ ಒಟ್ಟು 460 ಉಪ ವಲಯ ಅರಣ್ಯಾಧಿಕಾರಿ ಹುದ್ದೆಗಳಿಗೆ ನೇರ ನೇಮಕಾತಿಗಾಗಿ ಅರ್ಹ ಅಭ್ಯರ್ಥಿಗಳಿಂದ ಅರ್ಜಿಗಳನ್ನು ದಿನಾಂಕ : 28/03/2016ರಂದು ಆಹ್ವಾನಿಸಲಾಗಿರುತ್ತದೆ.

ಸದರಿ ಅಧಿಸೂಚನೆಯ ಕ್ರಮ ಸಂಖ್ಯೆ.4.1ರಲ್ಲಿ ಅಧಿಸೂಚನೆಯ ದಿನಾಂಕಕ್ಕೆ ಉಪ ವಲಯ ಅರಣ್ಯಾಧಿಕಾರಿ ಹುದ್ದೆಗೆ ನಿಗಧಿಪಡಿಸಿದ ವಿದ್ಯಾರ್ಹತೆ ಹೊಂದಬೇಕು ಎಂದು ತಿಳಿಸಲಾಗಿರುತ್ತದೆ. ಆದರೆ ವಲಯ ಅರಣ್ಯಾಧಿಕಾರಿ ಹುದ್ದೆಗೆ ಅರ್ಜಿ ಸಲ್ಲಿಸಲು ನಿಗಧಿಪಡಿಸಿರುವ ಕೊನೆಯ ದಿನಾಂಕದೊಳಗೆ ನಿಗಧಿಪಡಿಸಿದ ವಿದ್ಯಾರ್ಹತೆ ಹೊಂದಿರಬೇಕು ಎಂದು ಅಧಿಸೂಚನೆ ಹೊರಡಿಸಲಾಗಿರುತ್ತದೆ. ವಲಯ ಅರಣ್ಯಾಧಿಕಾರಿ ಮತ್ತು ಉಪ ವಲಯ ಅರಣ್ಯಾಧಿಕಾರಿ ಹುದ್ದೆಗೆ ಒಂದೇ ವಿದ್ಯಾರ್ಹತೆ ನಿಗಧಿಪಡಿಸಿರುವುದರಿಂದ ಈ ಕೆಳಕಂಡಂತೆ ತಿದ್ದುಪಡಿ ಮಾಡಲಾಗಿದೆ.

ಈ ಕಛೇರಿಯಿಂದ ಅಧಿಸೂಚನೆ ಸಂಖ್ಯೆ.ಬಿ9–ನೇಮಕಾತಿ–ವಿವ–4/2015–16, ದಿನಾಂಕ 28/03/2016ರ 4.1ಅನ್ನು ಅಧಿಸೂಚನೆಯ ದಿನಾಂಕಕ್ಕೆ ಉಪ ವಲಯ ಅರಣ್ಯಾಧಿಕಾರಿ ಹುದ್ದೆಗೆ ನಿಗಧಿಪಡಿಸಿದ ವಿದ್ಯಾರ್ಹತೆ ಹೊಂದಬೇಕು ಎಂಬುದರ ಬದಲಾಗಿ ಉಪ ವಲಯ ಅರಣ್ಯಾಧಿಕಾರಿ ಹುದ್ದೆಗೆ ಅರ್ಜಿ ಸಲ್ಲಿಸಲು ನಿಗಧಿಪಡಿಸಿರುವ ಕೊನೆಯ ದಿನಾಂಕ: 17/05/2016ರೊಳಗೆ ನಿಗಧಿಪಡಿಸಿದ ವಿದ್ಯಾರ್ಹತೆ ಹೊಂದಿರಬೇಕು ಎಂದು ಓದಿಕೊಳ್ಳುವಂತೆ ತಿಳಿಸಿದೆ.

ಬೆಂಗಳೂರು,
ದಿನಾಂಕ: 30-03–2016

ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ,
(ಮುಖ್ಯಸ್ಥರು, ಅರಣ್ಯ ಪಡೆ)
ಮತ್ತು ನೇಮಕಾತಿ ಪ್ರಾಧಿಕಾರ.